10 - 136

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಗ್ರಾಮೀಣ ಪುನರ್ವಸತಿ ಯೋಜನೆಯಡಿ ರಾಜ್ಯ ಸಂಯೋಜಕರಿಗೆ ಗೌರವಧನವನ್ನು ಮಾಹೆಯಾನ ರೂ. 10,000/- ಗಳಿಂದ 20,000/- ಗಳಿಗೆ ಹಾಗೂ ಮಾಹೆಯಾನ ಪ್ರವಾಸ ಭತ್ಯೆ ರೂ. 6,000/- ಒಟ್ಟು ರೂ. 26,000/- ಹೆಚ್ಚಿಸುವ ಬಗ್ಗೆ.

ಓದಲಾಗಿದೆ:

ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಪತ್ರ ಸಂಖ್ಯೆ: ಇಪಿ:ಗ್ರಾಪುಯೋ:10:ಜಿಸಂಹುಮಂ:2014-15/885 ದಿ:17.06.2015.

ಪ್ರಸ್ತಾವನೆ:

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ದಿ:25.07.2014ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯಲ್ಲಿ ಗ್ರಾಮೀಣ ಪುನರ್ವಸತಿಯಡಿ ಗೌರವಧನದ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ರಾಜ್ಯ ಸಂಯೋಜಕರಿಗೆ ಪ್ರಸ್ತುತ ನೀಡಲಾಗುತ್ತಿರುವ ಗೌರವಧನವನ್ನು ಮಾಹೆಯಾನ ರೂ. 10,000/- ಗಳಿಂದ 20,000/- ಗಳಿಗೆ ಹೆಚ್ಚಿಸಿ ಹಾಗೂ ಮಾಹೆಯಾನ ಪ್ರವಾಸ ಭತ್ಯೆ ರೂ. 6,000/-ಗಳನ್ನು ಪಾವತಿಸಲು ಅನುಮೋದನೆ ನೀಡಲಾಗಿರುವ ಬಗ್ಗೆ ಪ್ರಸ್ತಾಪಿಸುತ್ತಾ ರಾಜ್ಯ ಸಂಯೋಜಕರಿಗೆ ನೀಡುತ್ತಿರುವ ಗೌರವಧನವನ್ನು ಮಾಹೆಯಾನ ರೂ. 10,000/- ಗಳಿಂದ 20,000/- ಗಳಿಗೆ ಹಾಗೂ ಮಾಹೆಯಾನ ಪ್ರವಾಸ ಭತ್ಯೆ ರೂ. 6,000/- ಒಟ್ಟು ಮಾಹೆಯಾನ ರೂ. 26,000/- ಹೆಚ್ಚಿಸುವ ಬಗ್ಗೆ ಮೇಲೆ ಓದಲಾದ ದಿ:17.06.2015ರ ಪತ್ರದಲ್ಲಿ ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರು ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಮಮಇ 212 ಪಿಹೆಚ್‌ಪಿ 2015, ಬೆಂಗಳೂರು, ದಿನಾಂಕ: 20.10.2015.**

ಗ್ರಾಮೀಣ ಪುನರ್ವಸತಿ ಯೋಜನೆಯು ಜಿಲ್ಲಾ ಮಟ್ಟದಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳ್ಳುವಂತೆ ಮೇಲ್ವಿಚಾರಣೆ ನಡೆಸಲು ಹಾಗೂ ರಾಜ್ಯದಲ್ಲಿನ ವಿಕಲಚೇತನರಿಗೆ ಇಲಾಖಾ ಸೌಲಭ್ಯಗಳನ್ನು ಸಮರ್ಪಕವಾಗಿ ತಲುಪಿಸಲು ಗೌರವಧನದ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ರಾಜ್ಯ ಸಂಯೋಜಕರಿಗೆ ಪ್ರಸ್ತುತ ನೀಡಲಾಗುತ್ತಿರುವ ಗೌರವಧನವನ್ನು ಮಾಹೆಯಾನ ರೂ. 10,000/- ಗಳಿಂದ 20,000/- ಗಳಿಗೆ ಹಾಗೂ ಮಾಹೆಯಾನ ಪ್ರವಾಸ ಭತ್ಯೆ ರೂ. 6,000/-ಗಳನ್ನು ಸೇರಿ ಒಟ್ಟು ಮಾಹೆಯಾನ ರೂ. 26,000/-ಗಳಿಗೆ ಹೆಚ್ಚಿಸಲು ಹಾಗೂ ಸದರಿ ವೆಚ್ಚವನ್ನು ಲೆಕ್ಕ ಶೀರ್ಷಿಕೆ 2235-02-101-0-53 ಯೋಜನೆ, ಉಪ ಲೆಕ್ಕ ಶೀರ್ಷಿಕೆ 059 ಇತರೆ ಖರ್ಚುಗಳಡಿ ಭರಿಸಲು ಆಡಳಿತಾತ್ಮಕ ಮಂಜೂರಾತಿಯನ್ನು ನೀಡಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

ಸಂಖ್ಯೆ 999
ದಿನಾಂಕ 26/10/15

28/10/15

(ಜಯಲಕ್ಷ್ಮಿ) 20/10/15
ಸರ್ಕಾರದ ಅಧೀನ ಕಾರ್ಯದರ್ಶಿ-2,
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ.

ಇವರಿಗೆ:

1. ಪ್ರಧಾನ ಮಹಾಲೇಖಪಾಲರು, (ಜಿ &ಎಸ್‌ಎಸ್‌ಎ) ಕರ್ನಾಟಕ, ಪೋಸ್ಟ್ ಬ್ಯಾಗ್ ಸಂಖ್ಯೆ "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ 5398, ಬೆಂಗಳೂರು-560001.

2. ಪ್ರಧಾನ ಮಹಾಲೇಖಪಾಲರು, (ಇ & ಆರ ಎಸ್ ಎ )ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ:5398. ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು, (ಎ & ಇ )ಕರ್ನಾಟಕ, ಹೊಸ ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು-560001.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಅಪ್ತ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
5. ನಿರ್ದೇಶಕರು, ಪಿ.ಎಂ.ಐ. ವಿಭಾಗ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
6. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
7. ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು.
8. ಜಂಟಿ ನಿರ್ದೇಶಕರು/ಉಪ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
9. ಆಂತರಿಕ ಆರ್ಥಿಕ ಸಲಹೆಗಾರರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
10. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನ ಸೌಧ, ಬೆಂಗಳೂರು.
11. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಚಿವ ರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
12. ಸರ್ಕಾರದ ಪ್ರಧಾನ ಕಾರ್ಯದರ್ಶಿರವರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.
13. ಸರ್ಕಾರದ ಉಪ ಕಾರ್ಯದರ್ಶಿರವರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಸಹಾಯಕ, ಬಹುಮಹಡಿ ಕಟ್ಟಡ, ಬೆಂಗಳೂರು.
14. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ- 3 ಮತ್ತು 4).
15. ಅಧಿಕಾರಯುಕ್ತ ಸಮಿತಿ ವಿಭಾಗ, ಪ್ರಧಾನ ಕಛೇರಿ, ಬೆಂಗಳೂರು.
16. ಶಾಖಾಧಿಕಾರಿ, ಸ್ವೀಕೃತಿ ಮತ್ತು ರವಾನೆ ಶಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
17. ಶಾಖಾ ರಕ್ಷಾ ಕಡತ/ ಓ.ಡಿ.ಜಿ.ಸಿ/ ಸೂಚನಾ ಫಲಕ/ ಹೆಚ್ಚುವರಿ ಪ್ರತಿಗಳು.